ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರಿಗೆ ಸಿ.ಎ.ಎಸ್ ರಡಿಯಲ್ಲಿ 2018ರ ಯುಜಿಸಿ ನಿಯಮಗಳ ಅನ್ವಯ ಶೈಕ್ಷಣಿಕ ಹಂತ 13ಎ ರ ವೇತನ ಶ್ರೇಣಿ ರೂ.131400-217100 ರಲ್ಲಿ ಸ್ಥಾನೀಕರಣ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1. ಯು.ಜಿ.ಸಿ. ನಿಯಮಗಳ ಆದೇಶ ಸಂಖ್ಯೆ: ಎಫ್1-2/ 2017(ಇಸಿ/ಪಿಎಸ್), ದಿ:18.07.2018
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 483 ಯುಎನ್ಇ 2017, ದಿ:16.03.2019 ಹಾಗೂ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾದ ಆದೇಶ ಹಾಗೂ ಮಾರ್ಗಸೂಚಿಗಳು.
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 123 ಡಿಸಿಇ 2020, ದಿ:02.03.2021
4. ಸರ್ಕಾರದ ಪತ್ರ ಸಂಖ್ಯೆ: ಇಡಿ 147 ಡಿಸಿಇ 2022 (ಇ) ದಿನಾಂಕ: 03.11.2022.
5. ಕೇಂದ್ರ ಕಛೇರಿಯಲ್ಲಿ ದಿನಾಂಕ: 16-03-2023 ರಿಂದ ದಿನಾಂಕ: 20-03-2023 ರವರೆಗೆ ನಡೆದ ಸಿ.ಎ.ಎಸ್ ಆಯ್ಕೆ ಸಮಿತಿಯ ಸಂದರ್ಶನ ಪ್ರಕ್ರಿಯೆ.
6. ಸರ್ಕಾರದ ಆದೇಶ ಸಂಖ್ಯೆ: ಇಡಿ 147 ಡಿಸಿಇ 2022 (ಇ) ದಿನಾಂಕ: 08.12.2023.
7. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಡಿ 147 ಡಿಸಿಇ 2022 (ಇ) ದಿನಾಂಕ: 26.02.2024.

* * * *

ಪ್ರಸ್ತಾವನೆ :

ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಿಗೆ 2016 ರ ಪರಿಷ್ಕೃತ ಯು.ಜಿ.ಸಿ. ವೇತನ ಶ್ರೇಣಿಗಳನ್ನು ಉಲ್ಲೇಖ(1) ಹಾಗೂ (2)ರ ಆದೇಶಗಳಲ್ಲಿ ಜಾರಿಗೊಳಿಸಲಾಗಿರುತ್ತದೆ. ಈ ಆದೇಶದಲ್ಲಿ ಸಹಾಯಕ ಪ್ರಾಧ್ಯಾಪಕರಿಗೆ ಶೈಕ್ಷಣಿಕ ಹಂತ 12ರ [ಯು.ಜಿ.ಸಿ ವೇತನ ಶ್ರೇಣಿ ರೂ.79800-21150] ರಲ್ಲಿ ಪೂರೈಸಿರುವ 03 ವರ್ಷಗಳ ಅರ್ಹತಾ ಅವಧಿಯನ್ನು ಪರಿಗಣಿಸಿ ಸಿ.ಎ.ಎಸ್ ರಡಿಯಲ್ಲಿ ಶೈಕ್ಷಣಿಕ ಹಂತ 13ಎ ರ ವೇತನ ಶ್ರೇಣಿ ರೂ.131400-217100 ರಲ್ಲಿ ಸ್ಥಾನೀಕರಣ ಹೊಂದಲು ಅವಕಾಶ ಕಲ್ಪಿಸಲಾಗಿರುತ್ತದೆ.

ಸರ್ಕಾರ ಹಾಗೂ ಯು.ಜಿ.ಸಿ.ಯ ಉಲ್ಲೇಖ (1) ಮತ್ತು (2) ರ ಆದೇಶಗಳನ್ವಯ 2016 ರ ಯು.ಜಿ.ಸಿ. ವೇತನ ಶ್ರೇಣಿಯಲ್ಲಿ ಅನ್ವಯಿಸುವ ಷರತ್ತಿಗೆ ಒಳಪಟ್ಟು ಸಿ.ಎ.ಎಸ್ ಯೋಜನೆಯಡಿಯಲ್ಲಿ (Career Advancement Scheme) ಉನ್ನತ ಶೈಕ್ಷಣಿಕ ಹಂತಕ್ಕೆ ಸ್ಥಾನೀಕರಣ ಮಂಜೂರು ಮಾಡಲು ಉಲ್ಲೇಖ (3) ರ ಸರ್ಕಾರದ ಆದೇಶದಲ್ಲಿ ಅನುಮೋದನೆ ನೀಡಲಾಗಿರುತ್ತದೆ.

ಉಲ್ಲೇಖ (1) ರಿಂದ (3) ರವರೆಗಿನ ಯುಜಿಸಿ ಮಾರ್ಗಸೂಚಿಗಳ ಹಾಗೂ ಸರ್ಕಾರದ ಆದೇಶ ಅನುಸಾರ ಶೈಕ್ಷಣಿಕ ಹಂತ 12 ರಿಂದ ಶೈಕ್ಷಣಿಕ ಹಂತ 13ಎ ರಲ್ಲಿ ಸ್ಥಾನೀಕರಣ ಮಂಜೂರು ಮಾಡುವ ಸಂಬಂಧ ಪ್ರಾಂಶುಪಾಲರು ತಮ್ಮ ಹಂತದಲ್ಲಿ ಯು.ಜಿ.ಸಿ.ಯ ದಿನಾಂಕ: 18.07.2018ರ ಕಂಡಿಕೆ 5.0 ರಿಂದ 6.4 ವರೆಗಿನ ಪ್ರಕಾರ ಆಯ್ಕೆ ಸಮಿತಿಯನ್ನು ರಚಿಸಿ ಸಹಾಯಕ ಪ್ರಾಧ್ಯಾಪಕರು/ ದೈಹಿಕ ಶಿಕ್ಷಣ ನಿರ್ದೇಶಕರು/ ಗ್ರಂಥಪಾಲಕರಿಗೆ ಸಂಬಂಧಿಸಿದಂತೆ, ಯು.ಜಿ.ಸಿ.ಯ ದಿ. 18/07/2018 ರ ಅಧಿಸೂಚನೆಯಲ್ಲಿ ನೀಡಲಾಗಿರುವ The entry-level Assistant Professors (Level 10) shall be eligible for promotion under the Career Advancement Scheme (CAS) through two successive levels (Level 11 and Level 12), provided they are assessed to fulfill the eligibility and performance criteria as laid down in Clause 6.3 of these UGC Regulations-2018 ರಂತೆ Appendix II Table I ಕೂಲಂಕಷವಾಗಿ ಪರಿಶೀಲಿಸಿ, ಗ್ರೇಡಿಂಗ್ ಆಧರಿಸಿ ಶೈಕ್ಷಣಿಕ ಹಂತಕ್ಕೆ ಅರ್ಹತೆ ಹೊಂದಿರುವವರ ಮಾಹಿತಿಗಳನ್ನು ನಿಗದಿತ ನಮೂನೆಗಳಲ್ಲಿ ಹಾಗೂ ಪ್ರಾಂಶುಪಾಲರ ಹಂತದ ಸಮಿತಿಯ ಶಿಫಾರಸ್ಸಿನೊಂದಿಗೆ ಅನುಮೋದನೆಗೆ ಸಲ್ಲಿಸಿ, ಅದರಂತೆ ಅರ್ಹ ಸಹಾಯಕ ಪ್ರಾಧ್ಯಾಪಕರಿಗೆ ಉನ್ನತ ಶೈಕ್ಷಣಿಕ ಹಂತ 13ಎ ರ ಸ್ಥಾನೀಕರಣಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಉಲ್ಲೇಖ (05) ರ ಸರ್ಕಾರದ ಆದೇಶ ಮತ್ತು ಉಲ್ಲೇಖ (07) ರ ತಿದ್ದುಪಡಿ ಆದೇಶಗಳಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರಿಗೆ ಸ್ಥಾನೀಕರಣ ಸೌಲಭ್ಯವನ್ನು ಸದರಿಯವರು ಸಿ.ಎ.ಎಸ್ ರಡಿ (Career Advancement Scheme) ಸ್ಥಾನೀಕರಣಕ್ಕೆ ಅರ್ಹತೆ ಹೊಂದಿದ ದಿನಾಂಕದಿಂದ ಅರ್ಹತಾ ಅವಧಿಯನ್ನು ಪರಿಗಣಿಸುವಂತೆ ಹಾಗೂ ವೇತನ ನಿಗದೀಕರಣ ಒಳಗೊಂಡಂತೆ ಸ್ಥಾನೀಕರಣದ ಆರ್ಥಿಕ ಸೌಲಭ್ಯಗಳನ್ನು ಸ್ಥಾನೀಕರಣ ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯವರ್ತಿಯಾಗಿ (The Monetary benefit on grant of CAS Shall be Prospective from the date of issue of the order) ಮಂಜೂರು ಮಾಡಲು ಆದೇಶಿಸಲಾಗಿರುತ್ತದೆ.

ಪ್ರಾಂಶುಪಾಲರ ಹಂತದ ಸಮಿತಿಯ ಶಿಫಾರಸ್ಸಿನ ಮೇರೆಗೆ ಸ್ವೀಕೃತಗೊಂಡ ಪ್ರಸ್ತಾವನೆಗಳನ್ನು ಈ ಕಛೇರಿಯ ಹಂತದಲ್ಲಿ ನಿಯಮಾನುಸಾರ ಪರಿಶೀಲಿಸಿ ಅರ್ಹತೆ ಹೊಂದಿದವವರನ್ನು ಕೇಂದ್ರ ಕಛೇರಿಯಲ್ಲಿ ರಚಿಸಲಾಗಿರುವ ವಿಷಯ ತಜ್ಞರು ಹಾಗೂ ವಿಶ್ವವಿದ್ಯಾಲಯದ ಪ್ರತಿನಿಧಿಗಳನ್ನೊಳಗೊಂಡ ಆಯ್ಕೆ ಸಮಿತಿಯ ಮುಂದೆ ಪೂರಕ ದಾಖಲೆಗಳೊಂದಿಗೆ ಹಾಜರುಪಡಿಸಲಾಯಿತು. ಅದರನ್ವಯ ಸಂದರ್ಶನಕ್ಕೆ/ಪರಿಶೀಲನೆಗೆ ಹಾಜರಾದ ಸಹಾಯಕ ಪ್ರಾಧ್ಯಾಪಕರ/ ದೈಹಿಕ ನಿರ್ದೇಶಕರ/ಗ್ರಂಥಪಾಲಕರ ಗ್ರೇಡಿಂಗ್‌ಗಳಿಗೆ ಸಂಬಂಧಿಸಿದ ಪೂರಕ ದಾಖಲೆಗಳನ್ನು, ಸಂಶೋಧನಾ ಲೇಖನಗಳು, ಶೈಕ್ಷಣಿಕ ಚಟುವಟಿಕೆಗಳು, ಪಠ್ಯ ಪುಸ್ತಕ ಪ್ರಕಟಿಸಿರುವ ಲೇಖನ, ಹಾಗೂ ಇತರೆ ಪೂರಕ ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸಿ ಶೈಕ್ಷಣಿಕ ಹಂತ 13 ಎ ಸ್ಥಾನೀಕರಣ ಮಂಜೂರು ಮಾಡಲು ತೀರ್ಮಾನಿಸಲಾಯಿತು. ಇಲಾಖಾ ಹಂತದ ಸಿ.ಎ.ಎಸ್ ಆಯ್ಕೆ ಸಮಿತಿಯ ತೀರ್ಮಾನದಂತೆ ಆಯ್ಕೆ ಹೊಂದಿದವರಿಗೆ ಯುಜಿಸಿ ವೇತನ ಶ್ರೇಣಿ ರೂ.131400–217100 ರಲ್ಲಿ ಶೈಕ್ಷಣಿಕ ಹಂತ 13ಎ ಕ್ಕೆ ಸ್ಥಾನೀಕರಣ ಮಂಜೂರು ಮಾಡಲು ಈ ಆದೇಶ.

ಆದೇಶ ಸಂಖ್ಯೆ:ಕಾಶಿಇ/121/ಶೈ.ಹಂತ/13ಎ/ಬಸ್ಥಾವಿ/2022–23 ಬೆಂಗಳೂರು, ದಿನಾಂಕ : 11 -03-2024

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ದಿನಾಂಕ : 02.03.2021ರ ಸಂಖ್ಯೆ : ಇಡಿ/123/ಡಿಸಿಇ/2020 ರ ಆದೇಶದ ಅನುಮೋದನೆ ಪ್ರಕಾರ ಪ್ರಾಂಶುಪಾಲರ ಹಂತದ ಸಮಿತಿಯ ಶಿಫಾರಸ್ಸಿನ ಮೇರೆಗೆ ಹಾಗೂ ಇಲಾಖಾ ಹಂತದ ಸ್ಥಾನೀಕರಣ ಆಯ್ಕೆ ಸಮಿತಿಯ ತೀರ್ಮಾನದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರಿಗೆ ಸಂಬಂಧಿಸಿದಂತೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ಹೆಸರಿಸಿರುವ ಸಹಾಯಕ ಪ್ರಾಧ್ಯಾಪಕರಿಗೆ ಶೈಕ್ಷಣಿಕ ಹಂತದ 13ಎ ಗೆ ಸಿ.ಎ.ಎಸ್ ರಡಿಯಲ್ಲಿ ಸ್ಥಾನೀಕರಣವನ್ನು ಯುಜಿಸಿ ವೇತನ ಶ್ರೇಣಿ ರೂ.131400–217100 ರಲ್ಲಿ ಈ ಕೆಳಕಂಡ ಷರತ್ತುಗಳಿಗೆ

ಒಳಪಟ್ಟು ಉಲ್ಲೇಖ (04), (06) ಮತ್ತು (07) ರ ಸರ್ಕಾರದ ಆದೇಶದಂತೆ ಸಿ.ಎ.ಎಸ್ ರಡಿ ಸ್ಥಾನೀಕರಣಕ್ಕೆ ಅರ್ಹತೆ ಹೊಂದಿದ ದಿನಾಂಕದಿಂದ ಅರ್ಹತಾ ಅವಧಿಯನ್ನು ಪರಿಗಣಿಸಿ, ವೇತನ ನಿಗದೀಕರಣ ಒಳಗೊಂಡಂತೆ ಸ್ಥಾನೀಕರಣದ ಆರ್ಥಿಕ ಸೌಲಭ್ಯಗಳನ್ನು ಸ್ಥಾನೀಕರಣ ಮಂಜೂರಾತಿ ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯವರ್ತಿಯಾಗಿ ಅನ್ವಯವಾಗುವಂತೆ ಮಂಜೂರು ಮಾಡಿ ಆದೇಶಿಸಲಾಗಿದೆ.

<u>ಷರತ್ತುಗಳು</u> :

1. 2018ರ ಯುಜಿಸಿ ವೇತನ ಶ್ರೇಣಿಗಳಲ್ಲಿನ ಗ್ರೇಡಿಂಗ್ ಆಧಾರಿತ ಶೈಕ್ಷಣಿಕ ಹಂತ ಮಂಜೂರಾತಿಯು ಉಲ್ಲೇಖ (1) ರಿಂದ (3) ರವರೆಗಿನ ಯುಜಿಸಿ/ಸರ್ಕಾರದ ಆದೇಶಗಳಲ್ಲಿನ ನಿಯಮಗಳ ನಿಬಂಧನೆಗಳೊಪಟ್ಟಿರುತ್ತದೆ.
2. ಯು.ಜಿ.ಸಿ.ಯ ದಿ. 18/07/2018ರ ಅಧಿಸೂಚನೆಯಲ್ಲಿ ನೀಡಲಾಗಿರುವ Clause 6.4 A The entry-level Assistant Professors (Level 10) shall be eligible for promotion under the Career Advancement Scheme (CAS) through two successive levels (Level 11 and Level 12), provided they are assessed to fulfill the eligibility and performance criteria as laid down in Clause 6.3 of these UGC Regulations-2018 ರಲ್ಲಿ ನಿಗದಿಪಡಿಸಿರುವ ಎಲ್ಲಾ ಅಂಶಗಳನ್ನು ಪೂರೈಸಿರುವ ಬಗ್ಗೆ ಆಯ್ಕೆ ಸಮಿತಿಯು ಪರಿಶೀಲಿಸಿ ಶಿಫಾರಸ್ಸು ಮಾಡಿರುವ ಮೇರೆಗೆ ಮಂಜೂರಾತಿಗೆ ಅನುಮೋದನೆ ನೀಡಲಾಗಿದ್ದು, ಸಂಪೂರ್ಣ ಜವಾಬ್ದಾರಿ ಪ್ರಾಂಶುಪಾಲರ ಹಂತದ ಸಮಿತಿಯದ್ದಾಗಿರುತ್ತದೆ. ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಯಾವುದೇ ತಪ್ಪು ಮಾಹಿತಿಗಳನ್ನು ಒದಗಿಸಿರುವುದು ಕಂಡು ಬಂದಲ್ಲಿ ಸಂಬಂಧಿಸಿದ ಸಹ ಪ್ರಾಧ್ಯಾಪಕರ ಶೈಕ್ಷಣಿಕ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯನ್ನು ನೀಡದೇ ಹಿಂಪಡೆಯಲಾಗುವುದು. ತಪ್ಪು ಮಾಹಿತಿ ಒದಗಿಸಿದ ಸಹಾಯಕ ಪ್ರಾಧ್ಯಾಪಕರು/ ಗ್ರಂಥಪಾಲಕರು/ ದೈಹಿಕ ಶಿಕ್ಷಣ ನಿರ್ದೇಶಕರ ಹಾಗೂ ಶಿಫಾರಸ್ಸು ಮಾಡಿರುವ ಪ್ರಾಂಶುಪಾಲರ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು.
3. ಸಹಾಯಕ ಪ್ರಾಧ್ಯಾಪಕರ ಖಾಯಂ ನೇಮಕಾತಿ ದಿನಾಂಕ, ಯು.ಜಿ.ಸಿ. ವೇತನ ನಿಗಧೀಕರಣದ ದಿನಾಂಕ, ವೇತನ ರಹಿತ ರಜೆ/ಅನಧಿಕೃತ ಗೈರು ಹಾಜರಿ, ಶಿಸ್ತು ಕ್ರಮದ ಮಾಹಿತಿ, ಸಂಶೋಧನಾ ಲೇಖನ ಹಾಗೂ ರೆಫ್ರೆಷರ್ ಕೋರ್ಸ್‌ಗಳನ್ನು ನಿಗದಿತ ಎರಡು ವಾರದ ತರಬೇತಿ ಪೂರೈಸಿರುವುದು, ಇನ್ನಿತರೆ ಎಲ್ಲಾ ಅಂಶಗಳಿಗೆ ಸಂಬಂಧಿಸಿದಂತೆ ಪ್ರಾಂಶುಪಾಲರ ಹಂತದ ಸಮಿತಿಯು ಮತ್ತೊಮ್ಮೆ ಪರಿಶೀಲಿಸುವ ನಿಬಂಧನೆಗೊಳಪಟ್ಟಿರುತ್ತದೆ.
4. ಈ ಸ್ಥಾನೀಕರಣ ಮಂಜೂರಾತಿಯು ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆ/ಪತ್ರಗಳಲ್ಲಿ ನಿಗದಿಪಡಿಸುವ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
5. ಈ ವೃತ್ತಿ ಪದೋನ್ನತಿಯನ್ನು ಸೇವಾ ಜೇಷ್ಟತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.
6. ಈ ಆದೇಶದನ್ವಯ ಮಂಜೂರು ಮಾಡಲಾದ ಶೈಕ್ಷಣಿಕ ಹಂತಗಳ ಸ್ಥಾನೀಕರಣವು ಸ್ಥಳೀಯ/ ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಟ್ಟಿದ್ದು, ಯಾವುದೇ ಅಸಂಗತೆ ಮಾಹಿತಿ ಕಂಡು ಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕ್ಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.
7. ಸ್ಥಾನೀಕರಣ ಮಂಜೂರಾತಿ ಆದೇಶದ ಮೇರೆಗೆ ಪ್ರಾಂಶುಪಾಲರು ಎಲ್ಲಾ ದಾಖಲಾತಿಗಳನ್ನು ಮತ್ತೊಮ್ಮೆ ಪರಿಶೀಲಿಸಿದ ನಂತರ ಸಹ ಪ್ರಾಧ್ಯಾಪಕರ ವೇತನ ನಿಗದೀಕರಣದ ಬಗ್ಗೆ ಅಗತ್ಯ ಕ್ರಮಕೈಗೊಳ್ಳತಕ್ಕದ್ದು.
8. ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ಹಾಗೂ ತಿದ್ದುಪಡಿ ನಿಯಮಗಳು 2015ರನ್ವಯ ಸರ್ಕಾರಿ ನೌಕರರು ಸರ್ಕಾರದಿಂದ ನಿಗದಿಪಡಿಸಲಾಗಿರುವ ಅಧಿಕೃತ ಏಜನ್ಸಿಯಾದ KEONICS ನಿಂದ ನಡೆಸಲಾಗುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ (ಸಿ.ಎಲ್.ಟಿ) ಕಡ್ಡಾಯವಾಗಿ ಉತ್ತೀರ್ಣರಾಗಬೇಕಾಗಿರುತ್ತದೆ. (ಸಿ.ಎಲ್.ಟಿ) ಆದುದರಿಂದ ಈ ಆದೇಶದಲ್ಲಿ ಎ.ಜಿ.ಪಿ. ಮಂಜೂರಾಗಿರುವ ಬೋಧಕರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪೂರೈಸಿ ಸಲ್ಲಿಸುವಂತಹ ಪ್ರಮಾಣ ಪತ್ರವನ್ನು ಅವರ ಎ.ಜಿ.ಪಿ. ದಾಖಲಾತಿಗಳೊಂದಿಗೆ ಕಾಲೇಜನಲ್ಲಿ ಸಂರಕ್ಷಿಸುವಂತೆ ಪ್ರಾಂಶುಪಾಲರಿಗೆ ತಿಳಿಸಲಾಗಿದೆ.
9. ಸಹಾಯಕ ಪ್ರಾಧ್ಯಾಪಕರು ವಿವಿಧ ವಿಶ್ವವಿದ್ಯಾಲಯಗಳಿಂದ ಪಡೆದಿರುವ ಪಿಹೆಚ್‌ಡಿ ಪದವಿಯ ನೈಜತೆಯ ಆಧಾರದ ಮೇಲೆ ಆದೇಶ ಹೊರಡಿಸಲಾಗಿದ್ದು, ಈ ಬಗ್ಗೆ ಮುಂದೆ ಅಸಂಗತೆ ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಆದೇಶವನ್ನು ರದ್ದುಪಡಿಸುವ ಷರತ್ತಿಗೊಳಪಟ್ಟಿರುತ್ತದೆ.
10. ಸ್ಥಾನೀಕರಣ ಮಂಜೂರಾತಿ ಪ್ರಸ್ತಾವನೆಯಲ್ಲಿ ಸಲ್ಲಿಸಿರುವ ದೃಢೀಕರಣ ಪತ್ರಗಳಲ್ಲಿನ ಮಾಹಿತಿಯಲ್ಲಿ ಯಾವುದೇ ವ್ಯತಿರಿಕ್ತ ಮಾಹಿತಿ ಕಂಡು ಬಂದಲ್ಲಿ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆ. ಅಲ್ಲದೇ ಸುಳ್ಳು ಮಾಹಿತಿ/ಅಕ್ರಮ ದಾಖಲೆ ನೀಡಿದ ಅಧ್ಯಾಪಕರಿಗೆ ಮಂಜೂರಾತಿ ಆದೇಶವನ್ನು ರದ್ದುಗೊಳಸಲಾಗುವುದು.

11. ಉಲ್ಲೇಖ (06) ಮತ್ತು (07) ರ ಸರ್ಕಾರದ ಆದೇಶದನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯಾವರ್ತಿಯಾಗಿ ಸಹ ಪ್ರಾಧ್ಯಾಪಕರು ಶೈಕ್ಷಣಿಕ ಹಂತ 13ಎ ಸ್ಥಾನೀಕರಣದ ಆರ್ಥಿಕ ಸೌಲಭ್ಯಗಳಿಗೆ ಅರ್ಹರಾಗಿರುತ್ತಾರೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

<u>ಇವರಿಗೆ:</u>

1. ಮಹಾಲೇಖಪಾಲರು, GE IV A (ಎ & ಇ ಲೆಕ್ಕ ಪರಿಶೋಧನೆ-1, ಲೆಕ್ಕ ಪರಿಶೋಧನೆ-2) ಕರ್ನಾಟಕ ರಾಜ್ಯ, ಬೆಂಗಳೂರು-560 001 – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಹಾಗೂ ಅನುಬಂಧದಲ್ಲಿರುವ ಬೋಧಕರು ಈ ಮಂಜೂರಾತಿ ಆದೇಶ ಹೊರಡಿಸುವ ಪೂರ್ವದಲ್ಲಿಯೇ ವರ್ಗಾವಣೆ ಅಥವಾ ಇತರೆ ಕಾರಣಗಳಿಗಾಗಿ ಸ್ಥಳ ಬದಲಾವಣೆಯಾಗಿದ್ದಲ್ಲಿ ಅವರ ಪ್ರಭಾರ ವರ್ಗಾವಣೆ ಪ್ರಮಾಣ ಪತ್ರದಂತೆ (ಸಿ.ಟಿ.ಸಿ) ಮೂಲ ಕಾಲೇಜನ್ನು ಪರಿಗಣಿಸಲು ಕೋರಿದೆ.
2. ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಮೇಲ್ಕಂಡ ಆದೇಶವನ್ನು ಸಂಬಂಧಿಸಿದ ಸಹಾಯಕ ಪ್ರಾಧ್ಯಾಪಕರು/ದೈಹಿಕ ಶಿಕ್ಷಣ ನಿರ್ದೇಶಕರು/ಗ್ರಂಥಪಾಲಕರ ಗಮನಕ್ಕೆ ಬರುವಂತೆ ಸೂಚಿಸಲಾಗಿದೆ. ಉನ್ನತ ಶೈಕ್ಷಣಿಕ ಹಂತ 13ಎ ರಲ್ಲಿ ವರದಿ ಮಾಡಿಕೊಂಡ ಬಗ್ಗೆ ಸಿ.ಟಿ.ಸಿ., ಅಂತಿಮ ವೇತನ ಪತ್ರಗಳೊಂದಿಗೆ ವೇತನ ನಿಗದೀಕರಣಕ್ಕಾಗಿ ಪ್ರಸ್ತಾವನೆಯನ್ನು ನೇರವಾಗಿ ಮಹಾಲೇಖಪಾಲರು, GE IV A (ಎ & ಇ ಲೆಕ್ಕ ಪರಿಶೋಧನೆ-1, ಲೆಕ್ಕ ಪರಿಶೋಧನೆ-2) ಕರ್ನಾಟಕ ರಾಜ್ಯ, ಬೆಂಗಳೂರು-560 001 ಇವರಿಗೆ ಕಳುಹಿಸಿ ಕೊಡುವಂತೆ ಸೂಚಿಸಲಾಗಿದೆ.
3. ಎಲ್ಲಾ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮೇಲ್ಕಂಡ ಆದೇಶ ಹಾಗೂ ಅನುಬಂಧವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.

<u>ಪ್ರತಿಯನ್ನು :</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು - 560 001 – ಮಾಹಿತಿಗಾಗಿ.
2. ವ್ಯವಸ್ಥಾಪಕರು/ಅಧೀಕ್ಷಕರು, ಆಯವ್ಯಯ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ವ್ಯವಸ್ಥಾಪಕರು/ಅಧೀಕ್ಷಕರು, ಸೇವಾ ವಿಭಾಗ-1, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

ಕಾಲೇಜು ಶಿಕ್ಷಣ ಇಲಾಖೆ

ಅನುಬಂಧ-01

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಿಗೆ ಸಿ.ಎ.ಎಸ್ ಅಡಿಯಲ್ಲಿ ಶೈಕ್ಷಣಿಕ ಹಂತ 12 ರಿಂದ ಶೈಕ್ಷಣಿಕ ಹಂತ 13ಎ ಗೆ ಸ್ಥಾನೀಕರಣವನ್ನುಮಂಜೂರು ಮಾಡಿರುವ ಪಟ್ಟಿ

ಆದೇಶ ಸಂಖ್ಯೆ: ಕಾಶಿಇ/121/ಶೈ.ಹಂತ/13ಎ/ಬಸ್ಥಾವಿ/2022-23. ದಿನಾಂಕ: 11 -03-2024

| ಕ್ರ ಸಂ | ಹೆಸರು ಶ್ರೀ/ಶ್ರೀಮತಿ | ವಿಷಯ | ಕಾರ್ಯ ನಿರ್ವಹಿಸುತ್ತಿರುವ ಕಾಲೇಜು | ಶೈಕ್ಷಣಿಕ ಹಂತ 12 ರ ಮಂಜೂರು ಮಾಡಲಾಗಿರುವ ದಿನಾಂಕ | ಶೈಕ್ಷಣಿಕ ಹಂತ 13ಎ ಗೆ ನಿಗದಿಪಡಿಸಲಾದ ದಿನಾಂಕ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | ಡಾ ಯಮುನಾ ಎ ಕೊಣೇಸರ | ರಾಜ್ಯಶಾಸ್ತ್ರ | ಸಿ ಜಿ ಬಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅಕ್ಕಿ ಆಲೂರು | 18-02-2019 | 18-02-2012 | |
| 2 | ಡಾ ಶಾಂತಲಾ ಎ ಸಿ | ಇಂಗ್ಲೀಷ್ | ಸರ್ಕಾರಿ ಮಹಾವಿದ್ಯಾಲಯ ಕಲಬುರಗಿ (ಸ್ವಾಯತ್ತ) | 09-02-2019 | 09-02-2022 | |
| 3 | ಡಾ ಮುನಿವೆಂಕಟಪ್ಪ ಕೆ | ಅರ್ಥಶಾಸ್ತ್ರ | ಸರ್ಕಾರಿ ಮಹಿಳಾ ಕಾಲೇಜು ಕೋಲಾರ | 27-10-2019 | 27-10-2022 | ಶೈಕ್ಷಣಿಕ ಹಂತ 12 ರಲ್ಲಿ ಆರ್ ಸಿ ಪೂರೈಸಿದ ಮರು ದಿನಾಂಕ: 27.10.2019 ಕ್ಕೆ ನಿಗಧಿಪಡಿಸಲಾಗಿದ್ದು, ಶೈಕ್ಷಣಿಕ ಹಂತ 13ಎ ಅನ್ನು ದಿನಾಂಕ: 27-10-2022 ಕ್ಕೆ ಪರಿಗಣಿಸಲಾಗಿದೆ. |

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ